RNU AIR DHARWAD

# JUNE 26 2024
# ALL INDIA RADIO- DHARWAD
# PRADESH SAMACHARA (KANNADA) 7:05 AM

**ಮುಖ್ಯಾಂಶಗಳು**

- **ನಂದಿನಿ ಹಾಲಿನ ದರ ಪ್ರತಿ ಲೀಟರ್‌ಗೆ 2 ರೂಪಾಯಿ ಏರಿಕೆ; ಪರಿಷ್ಕೃತ ದರ ಇಂದಿನಿಂದಲೇ ಜಾರಿ.**
- **ಹೊಸ ಅನ್ವೇಷಣೆಗಳೊಂದಿಗೆ ಜೈವಿಕ ಉತ್ಪನ್ನ ಹಾಗೂ ಇಂಧನ ಉತ್ಪಾದನೆಗೆ ಆದ್ಯತೆ ನೀಡುವಂತೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಕರೆ.**
- **ಅಭಿವೃದ್ಧಿ ಯೋಜನೆಗಳಿಗೆ ಬಿಡುಗಡೆ ಆಗುವ ಅನುದಾನ ಸಕಾಲದಲ್ಲಿ ಬಳಸುವಂತೆ ಸಚಿವ ಸಂತೋಷ ಲಾಡ್ ಅಧಿಕಾರಿಗಳಿಗೆ ಸೂಚನೆ.**
- **ವಿಧಾನಪರಿಷತ್ ಉಪ ಚುನಾವಣೆಗೆ ಅಧಿಸೂಚನೆ ಪ್ರಕಟ; ಜುಲೈ 12 ರಂದು ಮತದಾನ.**

**ಈಗ ವಾರ್ತೆಗಳ ವಿವರ**

**ನಂದಿನಿ ಹಾಲಿನ ದರದಲ್ಲಿ ಪ್ರತಿ ಲೀಟರ್‌ಗೆ** 2 ರೂಪಾಯಿ ಏರಿಕೆ ಮಾಡಲಾಗಿದೆ. ಕರ್ನಾಟಕ ಸಹಕಾರ ಹಾಲು ಉತ್ಪಾದಕರ ಮಹಾಮಂಡಳಿ ಹಾಲಿನ ದರದಲ್ಲಿ ಹೆಚ್ಚಳ ಮಾಡಿದ್ದು, ಈ ಪರಿಷ್ಕೃತ ದರವು ಇಂದಿನಿಂದಲೇ ಜಾರಿಗೆ ಬರಲಿದೆ. ಹಾಲಿನ ದರದಲ್ಲಿ ಮಾತ್ರ ಹೆಚ್ಚಳ ಮಾಡಲಾಗಿದೆ. ಮೊಸರು, ಮಜ್ಜಿಗೆ ಸೇರಿದಂತೆ ಇತರೆ ಉತ್ಪನ್ನಗಳ ಬೆಲೆಯಲ್ಲಿ ಬದಲಾವಣೆ ಮಾಡಿಲ್ಲ. ಪ್ರಸ್ತುತ ಲೀಟರ್‌ಗೆ 44 ರೂಪಾಯಿ ಇರುವ ಒಂದು ಲೀಟರ್ ಹಾಲಿನ ಬೆಲೆಯು ಇಂದಿನಿಂದ 46 ರೂಪಾಯಿಯಾಗಲಿದೆ. ಹಾಗೆಯೇ 22 ದರವಿರುವ ಅರ್ಧ ಲೀಟರ್ ಹಾಲಿಗೆ 24 ರೂಪಾಯಿಯಾಗಲಿದೆ. ಇದೇ ವೇಳೆ ಒಂದು ಲೀಟರ್ ಮತ್ತು ಅರ್ಧ ಲೀಟರ್ ಪ್ಯಾಕೆಟ್ ಹಾಲಿಗೆ 50 ಎಂಎಲ್ ಹೆಚ್ಚುವರಿ ಸೇರಿಸಲಾಗುತ್ತದೆ. **ನಂದಿನಿ ಹಾಲಿನ ಪ್ಯಾಕೆಟ್**ಗಳಲ್ಲಿ ಹಾಲಿನ ಪ್ರಮಾಣವನ್ನು 50 ಎಂಎಲ್ ಹೆಚ್ಚಳ ಮಾಡಿ ಹೆಚ್ಚುವರಿ ಹಾಲಿಗೆ 2 ರೂಪಾಯಿ ದರ ನಿಗದಿಪಡಿಸಿ ಗ್ರಾಹಕರಿಂದ ಸಂಗ್ರಹಿಸಲಾಗುವುದು. ಆದರೆ, ಹಾಲಿನ ಬೆಲೆಯಲ್ಲಿ ಏರಿಕೆ ಮಾಡಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ ನೀಡಿದ್ದಾರೆ. ಅರ್ಧ ಲೀಟರ್ ಹಾಲಿನ ಪ್ಯಾಕೆಟ್‌ನಲ್ಲಿ 550 ಎಂ.ಎಲ್ ಹಾಗೂ ಲೀಟರ್ ಪ್ಯಾಕೆಟ್‌ನಲ್ಲಿ 1 ಸಾವಿರದ 50 ಎಂಎಲ್ ಹಾಲು ದೊರೆಯಲಿದೆ. ಈ ಹೆಚ್ಚುವರಿ 50 ಎಂಎಲ್ ಹಾಲಿಗೆ 2 ರೂಪಾಯಿ ನಿಗದಿ ಮಾಡಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಾಲು ಸಂಗ್ರಹಣಾ ಕೇಂದ್ರದಲ್ಲಿ ಯಾವುದೇ ಕಾರಣಕ್ಕೂ ರೈತರು ಹೆಚ್ಚುವರಿಯಾಗಿ ತರುವ ಹಾಲನ್ನು ನಿರಾಕರಿಸಬಾರದು ಎನ್ನುವ ಸದುದ್ದೇಶದಿಂದ, ಕರ್ನಾಟಕ ಹಾಲು ಮಹಾಮಂಡಳಿ ಈ ನಿರ್ಧಾರ ಕೈಗೊಂಡು, ಪ್ಯಾಕೆಟ್‌ಗಳಲ್ಲಿ ಹಾಲಿನ ಪ್ರಮಾಣ ಹೆಚ್ಚಳ ಮಾಡುವ ತೀರ್ಮಾನ ಮಾಡಿದೆ ಎಂದು ಮುಖ್ಯಮಂತ್ರಿ ಹೇಳಿದ್ದಾರೆ.

*******

**ಭಾರತ ವಿಶ್ವದ ಅತಿದೊಡ್ಡ ಗ್ರಾಹಕ** ಮತ್ತು ಎರಡನೇ ಅತಿದೊಡ್ಡ ಸಕ್ಕರೆ ಉತ್ಪಾದಕ ದೇಶವಾಗಿದೆ. ಹೊಸ ಅನ್ವೇಷಣೆಗಳೊಂದಿಗೆ ಜೈವಿಕ ಉತ್ಪನ್ನ ಮತ್ತು ಜೈವಿಕ ಇಂಧನ ಉತ್ಪಾದಿಸುವ ಕಾರ್ಯ ನಡೆಯಬೇಕಾಗಿದೆ ಎಂದು ಕೇಂದ್ರ ಆಹಾರ ಮತ್ತು ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ದೆಹಲಿಯ ಭಾರತ್ ಮಂಟಪದಲ್ಲಿ ಆಯೋಜಿಸಲಾಗಿರುವ 'ಸಕ್ಕರೆ ಮತ್ತು ಜೈವಿಕ ಇಂಧನಗಳು – ಉದಯೋನ್ಮುಖ ವಿಚಾರಗಳು' ಕುರಿತ ಮೂರು ದಿನಗಳ ಅಂತಾರಾಷ್ಟ್ರೀಯ ಸಕ್ಕರೆ ಮಂಡಳಿ ಸಭೆಗೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರಧಾನಮಂತ್ರಿಯವರು ಪುನರ್ ಬಳಕೆಮಾಡಬಹುದಾದ ಇಂಧನ ಮೂಲಗಳಿಗೆ ಒತ್ತು ನೀಡಿದ್ದು, ಈ ಕಾರ್ಯಾಗಾರದಲ್ಲಿ ಅವುಗಳ ಬಗ್ಗೆಯೂ ಚರ್ಚೆ ನಡೆಯಲಿದೆ ಎಂದರು.

*******

**ಸರ್ಕಾರದಿಂದ** ವಿವಿಧ ಅಭಿವೃದ್ಧಿ ಕಾಮಗಾರಿ, ಯೋಜನೆಗಳಿಗೆ ಬಿಡುಗಡೆ ಆಗುವ ಅನುದಾನವನ್ನು ಸಕಾಲದಲ್ಲಿ ಬಳಸದಿದ್ದರೆ ಸಂಬಂಧಿಸಿದ ಅಧಿಕಾರಿಯನ್ನು ಹೊಣೆಗಾರರನ್ನಾಗಿಸಿ, ಅವರಿಂದಲೇ ಆ ಹಣವನ್ನು ವಸೂಲು ಮಾಡಲು ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತದೆ ಎಂದು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹೇಳಿದ್ದಾರೆ. ಧಾರವಾಡ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಕೆಡಿಪಿ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಇಲಾಖೆಗಳಿಗೆ ಬಿಡುಗಡೆ ಆಗಿರುವ ಅನುದಾನ ಪೂರ್ಣ ಬಳಕೆಯಾಗಬೇಕು. ನಿಧಾನಗತಿ ಅಥವಾ ಬಳಕೆಯಲ್ಲಿ ನಿರ್ಲಕ್ಷ್ಯ ಧೋರಣೆ ಅನುಸರಿಸುವುದು ಸರಿಯಲ್ಲ. ಕ್ರಿಯಾ ಯೋಜನೆ ರೂಪಿಸಿ, ಗುರಿ ನಿಗದಿಗೊಳಿಸುವಾಗ ಆರ್ಥಿಕ ಗುರಿಯನ್ನು ಗುರುತಿಸಬೇಕು. ಆ ಪ್ರಕಾರ ಪ್ರಗತಿ ಸಾಧಿಸಬೇಕು ಎಂದರು.

*******

**ವಿಧಾನಪರಿಷತ್ ಸದಸ್ಯರಾಗಿದ್ದ ಜಗದೀಶ್ ಶೆಟ್ಟರ್** ರಾಜೀನಾಮೆಯಿಂದ ತೆರವಾಗಿರುವ ಸ್ಥಾನಕ್ಕೆ ಉಪ ಚುನಾವಣೆಗೆ ಅಧಿಸೂಚನೆ ಪ್ರಕಟವಾಗಿದೆ. ವಿಧಾನಸಭೆಯಿಂದ ವಿಧಾನಪರಿಷತ್‌ಗೆ ನಡೆಯಲಿರುವ ಚುನಾವಣೆಗೆ ನಿನ್ನೆಯಿಂದಲೇ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಿದ್ದು, ಜುಲೈ 2ರ ವರೆಗೆ ಉಮೇದುವಾರಿಕೆ ಸಲ್ಲಿಕೆಗೆ ಅವಕಾಶವಿದೆ. ಜುಲೈ 3 ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ಜುಲೈ 5 ರಂದು ಉಮೇದುವಾರಿಕೆ ಹಿಂತೆಗೆದುಕೊಳ್ಳಲು ಕಡೆಯ ದಿನವಾಗಿದೆ. ಜುಲೈ 12 ರಂದು ಬೆಳಗ್ಗೆ 9 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಮತದಾನ ನಡೆಯಲಿದೆ. ಅದೇ ದಿನ ಸಂಜೆ 5 ಗಂಟೆಗೆ ಮತ ಎಣಿಕೆ ಜರುಗಲಿದೆ.

*******

**ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಇದೇ ತಿಂಗಳ 30 ರಂದು** ಬೆಳಗ್ಗೆ 11 ಗಂಟೆಗೆ ಆಕಾಶವಾಣಿಯ 'ಮನ್ ಕಿ ಬಾತ್' ಕಾರ್ಯಕ್ರಮದ ಮೂಲಕ ದೇಶದ ಜನತೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಮನ್ ಕಿ ಬಾತ್ ಕಾರ್ಯಕ್ರಮದ 111 ನೇ ಆವೃತ್ತಿ ಇದಾಗಿದ್ದು, ಮೈ ಜಿ.ಒ.ವಿ ಓಪನ್ ಫೋರಮ್, ನಮೋ ಆ್ಯಪ್ ಮೂಲಕ ಸಾರ್ವಜನಿಕರು ತಮ್ಮ ಅನಿಸಿಕೆ, ಅಭಿಪ್ರಾಯಗಳನ್ನು ಹಂಚಿಕೊಳ್ಳಬಹುದು. ಅಲ್ಲದೇ, 1800–1–1–7800 ಉಚಿತ ದೂರವಾಣಿ ಸಂಖ್ಯೆಗೆ ಕರೆ ಮಾಡಿಯೂ ಸಂದೇಶಗಳನ್ನು ದಾಖಲಿಸಬಹುದಾಗಿದೆ.

*******

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.**

*******

**ರಾಜ್ಯದ ಮಾನವ ಸಂಪನ್ಮೂಲಕ್ಕೆ ವಿಶ್ವದಲ್ಲಿ ಅತೀ ಹೆಚ್ಚು ಬೇಡಿಕೆ** ಇದೆ ಎಂದು ಐಟಿ ಬಿಟಿ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾನವ ಸಂಪನ್ಮೂಲದ ವಿ ´ಯದಲ್ಲಿ ಬೇರೆ ರಾಜ್ಯಗಳೊಂದಿಗೆ ರಾಜ್ಯ ಪೈಪೋಟಿ ನಡೆಸುತ್ತಿಲ್ಲ. ಬದಲಾಗಿ ವಿಶ್ವದ ಮುಂದುವರೆದ ದೇಶಗಳಾದ ಚೈನಾ ಅಮೇರಿಕಾ, ಇಂಗ್ಲೆಂಡ್, ಫ್ರಾನ್ಸ್ ದೇಶಗಳೊಂದಿಗೆ ಪೈಪೋಟಿ ನಡೆಸಲಾಗುವುದು ಎಂದು ತಿಳಿಸಿದರು.

*******

**ಇಂದು ಅಂತಾರಾಷ್ಟ್ರೀಯ, ಮಾದಕ** ವ್ಯಸನ ಹಾಗೂ ಮಾದಕ ವಸ್ತುಗಳ ಅಕ್ರಮ ಸಾಗಾಟ ವಿರೋಧಿ ದಿನ. ಪ್ರತಿ ವರ್ಷ ಜೂನ್ 26 ರಂದು ಮಾದಕ ವಸ್ತುಗಳಿಂದಾಗುವ ದುಷ್ಪರಿಣಾಮಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಈ ದಿನದಂದು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತದೆ. ಕಳಂಕ ಮತ್ತು ತಾರತಮ್ಯ ನಿಲ್ಲಿಸಿ, ವ್ಯಸನ ಮುಕ್ತತೆಯ ಕ್ರಮಗಳನ್ನು ಬಲಗೊಳಿಸಿ ಎಂಬುದು ಈ ಬಾರಿಯ ಧ್ಯೇಯವಾಗಿದೆ.

*******

**ಜಲಮೂಲಗಳ ಸಂರಕ್ಷಣೆಯ ಧ್ಯೇಯದೊಂದಿಗೆ, ರಾಜ್ಯವ**ನ್ನು ಜಲ ಸಂಪದ್ಭರಿತ ರಾಜ್ಯವನ್ನಾಗಿಸುವ ನಿಟ್ಟಿನಲ್ಲಿ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ, ಕೆರೆಗಳ ಪುನಶ್ಚೇತನ ಕಾರ್ಯ ಮುನ್ನಡೆಸುತ್ತಿದೆ. ಕೆರೆ, ಸರೋವರಗಳಲ್ಲಿ ತುಂಬಿರುವ ಹೂಳು, ಗಿಡ ಗಂಟಿಗಳನ್ನು ತೆಗೆದು ಜಲ ಶೇಖರಣೆಯ ಸಾಮರ್ಥ್ಯವನ್ನು ಹೆಚ್ಚಿಸಿ, ಭೂಮಿಯ ಅಂತರ್ಜಲ ಮಟ್ಟವನ್ನು ಹೆಚ್ಚಿಸುವ ಪ್ರಯತ್ನ ಮಾದಲಾಗುತ್ತಿದೆ ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸಮುದಾಯ ಅಭಿವೃದ್ಧಿ ವಿಭಾಗದ, ಪ್ರಾದೇಶಿಕ ನಿರ್ದೇಶಕರಾದ ಆನಂದ ಸುವರ್ಣ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

**ಧ್ವನಿ: ಆನಂದ ಸುವರ್ಣ (38 ಸೆಕೆಂದುಗಳು)**

*******

**ಈಗ ಸಂಕ್ಷಿಪ್ತ ಸುದ್ದಿಗಳು**

**ಕೋಲಾರ ನಗರಸಭೆ** ವ್ಯಾಪ್ತಿಯ 35 ವಾರ್ಡಗಳಲ್ಲಿ ನಗರೋತ್ಥಾನ ಯೋಜನೆಯ ಮೂಲಕ ಹಮ್ಮಿಕೊಂಡಿರುವ ಕಾಮಗಾರಿಗಳನ್ನು ಮೂರು ತಿಂಗಳೊಳಗೆ ಪೂರ್ಣಗೊಳಿಸಬೇಕು ಎಂದು ಗುತ್ತಿಗೆದಾರರಿಗೆ ಶಾಸಕ ಕೊತ್ತೂರು ಜಿ ಮಂಜುನಾಥ್ ಸೂಚಿಸಿದ್ದಾರೆ.

*******

**ಸರ್ಕಾರದಿಂದ ಸಫಾಯಿ** ಕರ್ಮಚಾರಿಗಳಿಗೆ ಸಿಗುವ ವಿವಿಧ ಸೌಲಭ್ಯಗಳನ್ನು ಒದಗಿಸಬೇಕು. ಅವರಿಗೆ ಒದಗಿಸುವ ಪರಿಕರಗಳನ್ನು ಸಮರ್ಪಕವಾಗಿ ಬಳಸುವ ಕುರಿತು ಅರಿವು ಮೂಡಿಸಬೇಕು ಎಂದು ಗದಗ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅಧಿಕಾರಿಗಳಿಗೆ ಸೂಚಿಸಿದ್ದಾರೆ.

*******

**ಹಾವೇರಿ ಜಿಲ್ಲೆಗೆ 153 ಕೋಟಿ** ರೂಪಾಯಿ ಬೆಳೆಹಾನಿ ಪರಿಹಾರ ದೊರೆತಿದೆ. ಕೆಲ ಕಾರಣಗಳಿಂದ ಶೇಕಡ 5 ರಿಂದ 10 ರ ್ಟು ಬೆಳೆಹಾನಿ ಪ್ರಕರಣಗಳಿಗೆ ಪರಿಹಾರ ಬಿಡುಗಡೆಗೆ ವಿಳಂಬವಾಗಿದ್ದು, ವಿಳಂಬಕ್ಕೆ ಅಡ್ಡಿ ಉಂಟಾಗಿರುವ ತಾಂತ್ರಿಕ ದೋ ್ ಸರಿಪಡಿಸಿ ಅರ್ಹ ರೈತರಿಗೆ ಬೆಳೆಹಾನಿ ಪರಿಹಾರ ಬಿಡುಗಡೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ರಘುನಂದನಮೂರ್ತಿ ತಿಳಿಸಿದ್ದಾರೆ.

*******

**ಕರ್ನಾಟಕ ಸಂಭ್ರಮ-50ರ** ಅಂಗವಾಗಿ ಕರ್ನಾಟಕ ಜ್ಯೋತಿ ರಥಯಾತ್ರೆಯು ರಾಜ್ಯಾದ್ಯಂತ ಸಂಚರಿಸುತ್ತಿದ್ದು, ಜುಲೈ 9 ರಂದು ಚಿತ್ರದುರ್ಗ ಜಿಲ್ಲೆಗೆ ಆಗಮಿಸಿ, ಜುಲೈ 14 ರವರೆಗೆ ಜಿಲ್ಲೆಯಾದ್ಯಂತ "ಕರ್ನಾಟಕ ಜ್ಯೋತಿ ರಥಯಾತ್ರೆ" ನಡೆಯಲಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

*******

**ಚಿಕ್ಕಬಳ್ಳಾಪುರ ತಾಲ್ಲೂಕು** ಪಂಚಾಯತ್ ಸಭಾಂಗಣದಲ್ಲಿ **ಈ ತಿಂಗಳ 28 ರಂದು** ಜನತಾ ದರ್ಶನ ಕಾರ್ಯಕ್ರಮ ನಡೆಯಲಿದ್ದು, ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಸೇರಿದಂತೆ ಹಲವು ಅಧಿಕಾರಿಗಳು ಜನತಾ ದರ್ಶನದಲ್ಲಿ ಭಾಗವಹಿಸಿ ಸಾರ್ವಜನಿಕರ ಕುಂದಹುಕೊರತೆಗಳ ಅಹವಾಲುಗಳನ್ನು ಸ್ವೀಕರಿಸಲಿದ್ದಾರೆ ಎಂದು ತಾಲ್ಲೂಕು ಕಚೇರಿ ಪ್ರಕಟಣೆ ತಿಳಿಸಿದೆ.

*******

**ಬಡ ಮತ್ತು ಸಾಮಾನ್ಯ ಜನರ** ಆರ್ಥಿಕ ಸಬಲೀಕರಣಕ್ಕಾಗಿ ಸರ್ಕಾರ ಜಾರಿಗೆ ತಂದಿರುವ ಐದು ಮಹಾತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳು ಮುಂದುವರೆಯಲಿದ್ದು, ಇನ್ನೂ ಪರಿಣಾಮಕಾರಿ ಅನು ್ಠಾನ ಮತ್ತು ಯಶಸ್ಸಿಗೆ ಅಧಿಕಾರಿಗಳು ಸಹಕರಿಸಬೇಕೆಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನು ್ಠಾನ ಪ್ರಾಧಿಕಾರದ ಅಧ್ಯಕ್ಷ ಸಿ.ಎಸ್ ಚಂದ್ರಭೂಪಾಲ್ ಶಿವಮೊಗ್ಗದಲ್ಲಿ ಹೇಳಿದ್ದಾರೆ.

*******

**ಧಾರವಾಡ ಜಿಲ್ಲಾಡಳಿತ** ಹಾಗೂ ಕನ್ನಡ ಮತ್ತು ಸಂಸ್ಕøತ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಶ್ರೀ ಕೆಂಪೇಗೌಡ ಜಯಂತಿಯನ್ನು ನಾಳೆ ಕರ್ನಾಟಕ ಕುಲಪುರೋಹಿತ ಆಲೂರ ವೆಂಕಟರಾವ್ ಸಾಂಸ್ಕøತಿಕ ಭವನದಲ್ಲಿ ಆಯೋಜಿಸಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಕಾರ್ಯಕ್ರಮ ಉದ್ಘಾಟಿಸುವರು ಎಂದು ಕನ್ನಡ ಮತ್ತು ಸಂಸ್ಕøತಿ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

*******

**ಚಿತ್ರದುರ್ಗ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ** ಇದೇ ತಿಂಗಳ 29 ರಂದು ನೇರ ನೇಮಕಾತಿ ಸಂದರ್ಶನ ಹಮ್ಮಿಕೊಳ್ಳಲಾಗಿದ್ದು, ವಿವಿಧ ಖಾಸಗಿ ಕಂಪನಿಗಳು ತಮ್ಮ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಲು ಪುರುಷ, ಮಹಿಳೆ ಅಭ್ಯರ್ಥಿಗಳನ್ನು ನೇರವಾಗಿ ಆಯ್ಕೆ ಮಾಡಿಕೊಳ್ಳಲಿವೆ. ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

*******